ಕರ್ನಾಟಕ ಸರ್ಕಾರ

ನಂ.ಗ್ರಾಅಪ/416/ಗ್ರಾಪಂಅ/2014.

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ:30-06-2014.

## ಸುತ್ತೋಲೆ

ವಿಷಯ: ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳನ್ನು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳನ್ನು ಸರ್ಕಾರದ ಅನುಮತಿ ಇಲ್ಲದೆಯೇ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸ್ಥಳೀಯ ಮಟ್ಟದಲ್ಲಿ ಆಂತರಿಕ ಬದಲಾವಣೆ/ನಿಯೋಜನೆ/ಬೇರೆ ಇಲಾಖಾ ವ್ಯಾಪ್ತಿಗೆ ನಿಯೋಜನೆ/ವರ್ಗಾವಣೆ ಮಾಡಬಾರದೆಂದು-ಸೂಚನೆಗಳು.

ಉಲ್ಲೇಖ:
1. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಕಾ 2011 ದಿನಾಂಕ: 06-09-2011.
2. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 388 ಗ್ರಾಪಂಕಾ 2010, ದಿನಾಂಕ: 14-12-2010.
3. ಸರ್ಕಾರದ ಸುತ್ತೋಲೆ ಸಂಖ್ಯೆ: ಗ್ರಾಅಪ 83 ಗ್ರಾಪಂಕಾ 2011, ದಿನಾಂಕ: 07-06-2011.

**********

ಉಲ್ಲೇಖ 1,2,3ರ ಸುತ್ತೋಲೆಗಳಲ್ಲಿ ಗ್ರಾ.ಪಂ.ಅಭಿವೃದ್ಧಿ ಅಧಿಕಾರಿ ಗಳನ್ನು ಮತ್ತು ಕಾರ್ಯದರ್ಶಿಗಳನ್ನು ಗ್ರಾ.ಪಂ.ವ್ಯಾಪ್ತಿಯಲ್ಲಿ ಕಾರ್ಯ ನಿರ್ವಹಿಸಲು ಸೂಕ್ತ ಅವಕಾಶಗಳನ್ನು ಕಲ್ಪಿಸಿಕೊಡುವ ಬಗ್ಗೆ ಕಟ್ಟುನಿಟ್ಟಿನ ಕ್ರಮ ಅನುಸರಿಸಲು ಸೂಚಿಸಲಾಗಿತ್ತು.

ಜಿಲ್ಲಾ ಪಂಚಾಯಿತಿ ಮತ್ತು ತಾಲ್ಲೂಕು ಪಂಚಾಯಿತಿ ಹಂತದಲ್ಲಿ ವರ್ಗಾವಣಾ ನೀತಿಗಳನ್ನು ಉಲ್ಲಂಘಿಸಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ಮತ್ತು ಗ್ರಾಮ ಪಂಚಾಯಿತಿ ಕಾರ್ಯದರ್ಶಿಗಳನ್ನು ನಿಯೋಜನೆ ಹೆಸರಿನಲ್ಲಿ ಪರೋಕ್ಷವಾಗಿ ವರ್ಗಾವಣೆ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದ ಹಿನ್ನಲೆಯಲ್ಲಿ ಹಾಗೂ ಇದನ್ನೇ ಆಧಾರವಾಗಿಟ್ಟುಕೊಂಡು ಹಲವಾರು ನೌಕರರ ನಿಯೋಜನೆಗಾಗಿ ಸರ್ಕಾರದ ಹಂತದಲ್ಲಿ ಸಹ ಮನವಿಗಳು ಒತ್ತಡಗಳು ಬಂದ ಹಿನ್ನಲೆಯಲ್ಲ, ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ಜಿಲ್ಲಾ ಪಂಚಾಯತ್ ಮತ್ತು ತಾಲ್ಲೂಕು ಪಂಚಾಯತ್‌ಗಳ ಹಂತದಲ್ಲಿ ನಿಯೋಜನೆ ಮಾಡುತ್ತಿರುವುದನ್ನು ರದ್ದುಪಡಿಸಲು ದಿನಾಂಕ:7-6-2011ರ ಸುತ್ತೋಲೆಯಲ್ಲಿ ಎಲ್ಲಾ ಜಿಲ್ಲಾಪಂಚಾಯತ್‌ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ/ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ.

ಹೀಗಿದ್ದರೂ ಸಹ ಸ್ಥಳೀಯ ಒತ್ತಡ, ನೌಕರರ ಕೋರಿಕೆ, ಇತ್ಯಾದಿ ನೆಪಗಳ ಆಧಾರದ ಮೇಲೆ ಈ ನಿಯೋಜನೆಗಳನ್ನು ಇಂದಿಗೂ ಮುಂದುವರೆಸುತ್ತಿರುವುದು ಹಾಗೂ ಹೊಸದಾಗಿ ನಿಯೋಜನೆಗಳನ್ನು ಮಾಡುತ್ತಿರುವುದು ನಡೆಯುತ್ತಲೇ ಇರುತ್ತದೆ.

1993ರ ಪಂಚಾಯತ್ ರಾಜ್ ಕಾಯ್ದೆಯ ಅನುಷ್ಠಾನದಲ್ಲಿ ಮತ್ತು ಅಧಿಕಾರ ವಿಕೇಂದ್ರೀಕರಣ ಗ್ರಾಮೀಣಾಭಿವೃದ್ಧಿ ಕಾರ್ಯಕ್ರಮಗಳಲ್ಲಿ ರಾಷ್ಟ್ರಮಟ್ಟದಲ್ಲಿಯೇ ಕರ್ನಾಟಕ ಸರ್ಕಾರ ಉನ್ನತ ಪ್ರಗತಿಯನ್ನು ಸಾಧಿಸಿದೆ ಎಂದು ತಿಳಿಸಲು ಹರ್ಷವಾಗುತ್ತದೆ.

ಪಂಚಾಯತ್ ರಾಜ್ ಮೂಲ ಉದ್ದೇಶ ಅಧಿಕಾರ ವಿಕೇಂದ್ರೀಕರಣದಲ್ಲಿ ಜನಸಾಮಾನ್ಯರು ಪಾಲ್ಗೊಂಡು ರಾಷ್ಟ್ರದ ಪ್ರಗತಿಗೆ ಸಹಕಾರಿಯಾಗುವುದೇ ಆಗಿದೆ. ಸರ್ಕಾರದ ವಿವಿಧ ಯೋಜನೆಗಳು, ಕಲ್ಯಾಣ ಕಾರ್ಯಕ್ರಮಗಳು ಈ ತಂತ್ರಜ್ಞಾನ ಯುಗದಲ್ಲಿ ಜನಸಾಮಾನ್ಯರಿಗೆ ತಲುಪಿಸಿ ಜನರ ಜೀವನಮಟ್ಟವನ್ನು ಉನ್ನತೀಕರಿಸುವುದು ಸರ್ಕಾರದ ಧ್ಯೇಯೋದ್ದೇಶವಾಗಿದೆ.

ಈ ನಿಟ್ಟಿನಲ್ಲಿ ಸರ್ಕಾರದ ಪ್ರಯತ್ನ ಪ್ರಶಂಸನೀಯವಾಗಿದೆ. ಈ ಮೂಲ ಉದ್ದೇಶಕ್ಕಾಗಿಯೇ ಸರ್ಕಾರ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ಪ್ರತಿಯೊಂದು ಪಂಚಾಯಿತಿಗಳಿಗೆ ನೇಮಕ ಮಾಡಿದ್ದು ಸರ್ಕಾರದ ಯೋಜನೆಗಳನ್ನು ಫಲಾನುಭವಿಗಳಿಗೆ ತಲುಪಿಸಿ ಸಮೃದ್ಧ ಜೀವನ ಮಾಡಲು ಸ್ಥಳೀಯ ಮಟ್ಟದಲ್ಲಿ ಸಕಲ ನಾಗರೀಕ ಸೇವಾ ಸೌಲಭ್ಯಗಳನ್ನು ನೀಡಲು ಇಚ್ಛಿಸಿದೆ ಮತ್ತು ಸಾಧಿಸಿದೆ.

ಆದರೆ ಕೆಲವೊಂದು ಸ್ಥಳೀಯ ಮಟ್ಟದಲ್ಲಿ ಸರ್ಕಾರದ ಗಮನಕ್ಕೆ ತರದೇ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳನ್ನು ಮತ್ತು ಕಾರ್ಯದರ್ಶಿಗಳನ್ನು ಸ್ಥಳೀಯ ಹಂತದಲ್ಲಿ ನಿಯೋಜನೆ/ವರ್ಗಾವಣೆಗೆ ಒತ್ತಡ ತರುವುದು/ಶಿಫಾರಸ್ಸು ಕೋರಿಕೆಗಳನ್ನು ಮಾಡುತ್ತಿರುವುದು/ಇತರೆ ಇಲಾಖೆಗಳಿಗೆ ನಿಯೋಜನೆಗೆ ಒತ್ತಡ ತರುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿರುತ್ತದೆ. ಈ ಮೇಲ್ಕಂಡ ಕ್ರಮಗಳಿಂದ ಸರ್ಕಾರದ ಕಾರ್ಯಕ್ರಮಗಳು ನಿಯಮಾನುಸಾರ ಜನಸಾಮಾನ್ಯರಿಗೆ ತಲುಪಲು ಪಾರದರ್ಶಕತೆ ಕೊರತೆ ಎದ್ದು ಕಾಣುತ್ತದೆ. ಸ್ವಜನ ಪಕ್ಷಪಾತತೆ, ವೃತ್ತಿಪರ ಸೇವಾ ದಕ್ಷತೆಗೆ ದಕ್ಕೆ ಬರುತ್ತದೆ. ಹಾಗೂ ಅಧಿಕಾರ ವಿಕೇಂದ್ರೀಕರಣದ ಪ್ರಕ್ರಿಯೆಗೆ ತಡೆ ಉಂಟುಮಾಡುವ ಹಾಗೂ ಸರ್ಕಾರದ ವಿವಿಧ ಕಾರ್ಯಕ್ರಮಗಳನ್ನು ತ್ವರಿತ ಅನುಷ್ಠಾನಗೊಳಿಸಿವಲ್ಲಿ ವಿಳಂಬತೆ, ಕ್ರಿಯಾಶೀಲತೆಯ ಕೊರತೆಯಿಂದ ಪಂ.ರಾಜ್ ಇಲಾಖೆಯ ಆಡಳಿತಕ್ಕೆ ಹಿನ್ನಡೆಯಾಗುವ ಸಂಭವವಿರುತ್ತದೆ.

ಆದ್ದರಿಂದ ಇನ್ನು ಮುಂದೆ ಯಾವುದೇ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳನ್ನು ಸ್ಥಳೀಯ ವೃಂದ ಮಟ್ಟದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಣಾಧಿಕಾರಿಗಳ/ಸರ್ಕಾರದ ಗಮನಕ್ಕೆ ಬಾರದೇ ನಿಯೋಜನೆ/ವರ್ಗಾವಣೆ ಬೇರೆ ಇಲಾಖೆಗಳಿಗೆ ನಿಯೋಜನೆ/ಕೋರಿಕೆ ಶೀಫಾರಸ್ಸುಗಳನ್ನು ಮಾಡಬಾರದೆಂದು ಕಟ್ಟುನಿಟ್ಟಿನ ಆದೇಶ ನೀಡಲಾಗಿದೆ. ಇದನ್ನು ಪಾಲಿಸದ ಅಧಿಕಾರಿಗಳ ವಿರುದ್ಧ ಸರ್ಕಾರದಿಂದ ಶಿಸ್ತಿನ ಕ್ರಮ ಜರುಗಿಸಲಾಗುವುದು. ಈಗಾಗಲೇ ಸ್ಥಳೀಯ ಮಟ್ಟದಲ್ಲಿ ನಿಯೋಜನೆಗೊಂಡಿರುವ ಪಂಚಾಯತ್ ಅಭಿವೃದ್ಧಿ ಅಧಿಕಾರಿ/ಕಾರ್ಯದರ್ಶಿಗಳ ಅನ್ಯ ಕಾರ್ಯನಿಮಿತ್ತದ ಆಧಾರದ ಮೇಲೆ ಮಾಡಿರುವ ಆದೇಶವನ್ನು ಕೂಡಲೇ ರದ್ದುಗೊಳಿಸಲು ಸೂಚಿಸಿದೆ.

**ಈ ಮೇಲ್ಕಂಡ ಎಲ್ಲಾ ಸೂಚನೆಗಳನ್ನು ಮತ್ತು ಉಲ್ಲೇಖಿತ ಸುತ್ತೋಲೆಯಲ್ಲಿನ ಮಾರ್ಗಸೂಚಿಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿವಾಹಣಾಧಿಕಾರಿಗಳು/ಎಲ್ಲಾ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಣಾಧಿಕಾರಿಗಳು/ಎಲ್ಲಾ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಗಳಗೆ/ಕಾರ್ಯದರ್ಶಿಗಳಗೆ ಮತ್ತೊಮ್ಮೆ ತಿಳಸಿದೆ.**

30/6/14

**(ಕೆ.ಯಾಲಕ್ಕಿ ಗೌಡ)**
ನಿರ್ದೇಶಕರು (ಪಂ.ರಾಜ್) ಹಾಗೂ
ಸರ್ಕಾರದ ಪದನಿಮಿತ್ತ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ

30/6

ಗೆ:

೧) ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್‌ಗಳು,

೨) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.

೩) ಎಲ್ಲಾ ಗ್ರಾಮ ಪಂಚಾಯಿತಿ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳಿಗೆ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯಿತಿಗಳ ಮುಖಾಂತರ.

೪) ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.